# ಅಶೋಕ್ ಗಸ್ತಿ ಸಾವಿನಿಂದ ತೆರವಾದ ರಾಜ್ಯಸಭೆ ಸ್ಥಾನಕ್ಕೆ ಡಿ.1ಕ್ಕೆ ಚುನಾವಣೆ

## ಬಿಜೆಪಿ ಅಭ್ಯರ್ಥಿಗೆ ಆಯ್ಕೆ ಅವಕಾಶ: ಯಾರಿಗೆ ಟಿಕೆಟ್?

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಹಾಲಿ ರಾಜ್ಯಸಭಾ ಸದಸ್ಯರಾಗಿದ್ದ ಅಶೋಕ್ ಗಸ್ತಿ ಅವರು ಮಹಾಮಾರಿ ಕೊರೋನಾ ಸೋಂಕಿಗೆ ಬಲಿಯಾಗಿದ್ದರಿಂದ ತೆರವಾಗಿರುವ ಸ್ಥಾನಕ್ಕೆ ಚುನಾವಣೆ ಘೋಷಣೆಯಾಗಿದೆ.



ಬರುವ ಡಿಸೆಂಬರ್ 1ರಂದು ಚುನಾವಣೆ ನಡೆಯಲಿದ್ದು, ಅಂದೇ ಫಲಿತಾಂಶ ಪ್ರಕಟಗೊಳ್ಳಲಿದೆ. ನಾಮಪತ್ರ ಸಲ್ಲಿಸಲು ಈ ತಿಂಗಳ 18 ಕೊನೆಯ ದಿನವಾಗಿದೆ.

ಕಳೆದ ಜೂನ್‌ನಲ್ಲಿ ನಡೆದ ರಾಜ್ಯಸಭಾ ಚುನಾವಣೆಯಲ್ಲಿ ಅನಿರೀಕ್ಷಿತ ಎಂಬಂತೆ ಅಶೋಕ್ ಗಸ್ತಿ ಅವರನ್ನು ಅಭ್ಯರ್ಥಿಯನ್ನಾಗಿಸಿ ಬಿಜೆಪಿ ತೀರ್ಮಾನ ಕೈಗೊಂಡಿತ್ತು. ಬಿಜೆಪಿಗೆ ವಿಧಾನಸಭೆಯಲ್ಲಿ ಬಲ ಇದ್ದುದರಿಂದ ನಂತರ ಅವರು ಚುನಾವಣೆಯಲ್ಲೂ ಅವಿರೋಧವಾಗಿ ಆಯ್ಕೆಯಾದರು. ಆದರೆ, ಕೊರೋನಾ ಸೋಂಕಿಗೆ ಒಳಗಾಗಿ ಕಳೆದ ಸೆ.17ರಂದು ಗಸ್ತಿ ಅವರು ನಿಧನ ಹೊಂದಿದರು.

ಇದುವರೆಗೆ ಬಿಜೆಪಿಯಲ್ಲಿ ರಾಜ್ಯಸಭಾ ಚುನಾವಣೆಗೆ ಯಾರನ್ನು ಕಣಕ್ಕಿಳಿಸಬೇಕು ಎಂಬುದರ ಬಗ್ಗೆ ಗಂಭೀರ ಚರ್ಚೆ ಆರಂಭವಾಗಿಲ್ಲ. ಪಕ್ಷದ ಮುಖಂಡರು ವಿಧಾನಪರಿಷತ್ತಿನ ನಾಲ್ಕು ಕ್ಷೇತ್ರಗಳ ಚುನಾವಣೆ ಮತ್ತು ವಿಧಾನಸಭೆಯ ಎರಡು ಕ್ಷೇತ್ರಗಳ ಉಪಚುನಾವಣೆಯ ಭರಾಟೆಯಲ್ಲಿ ನಿರತರಾಗಿದ್ದರು. ಇನ್ನು ಮುಂದೆ ರಾಜ್ಯಸಭಾ ಚುನಾವಣೆಯ ಅಭ್ಯರ್ಥಿ ಬಗ್ಗೆ ಸಮಾಲೋಚನೆ ನಡೆಯಲಿದೆ ಎಂದು ತಿಳಿದು ಬಂದಿದೆ.

ಇತರ ಹಿಂದುಳಿದ ವರ್ಗಗಳಿಗೆ ಸೇರಿದ ಅಶೋಕ್ ಗಸ್ತಿ ಅವರು ಕಲ್ಯಾಣ ಕರ್ನಾಟಕ ಪ್ರದೇಶದ ರಾಯಚೂರು ಜಿಲ್ಲೆಗೆ ಸೇರಿದವರು. ಇದೀಗ ಇತರ ಹಿಂದುಳಿದ ವರ್ಗಕ್ಕೆ ಸೇರಿದ ಮತ್ತು ಕಲ್ಯಾಣ ಕರ್ನಾಟಕ ಭಾಗದವರನ್ನೇ ಅಭ್ಯರ್ಥಿಯನ್ನಾಗಿಸುತ್ತಾರೋ ಅಥವಾ ಅದನ್ನು ಕೈಬಿಟ್ಟು ಬೇರೊಬ್ಬರನ್ನು ಆಯ್ಕೆ ಮಾಡಲಾಗುತ್ತದೆಯೊ ಎಂಬುದು ಇತ್ಯರ್ಥವಾಗಬೇಕಿದೆ.

**5ರಂದು ಕೋರ್ ಕಮಿಟಿ ಸಭೆಯಲ್ಲಿ ಚರ್ಚೆ:** ಈ ತಿಂಗಳ 5ರಂದು (ಗುರುವಾರ) ಮಂಗಳೂರಿನಲ್ಲಿ ಬಿಜೆಪಿ ರಾಜ್ಯ ವಿಶೇಷ ಸಭೆ ಮತ್ತು ಕೋರ್ ಕಮಿಟಿ ಸಭೆ ನಡೆಯಲಿದೆ. ಈ ವೇಳೆ ರಾಜ್ಯಸಭಾ ಚುನಾವಣೆಗೆ ಅಭ್ಯರ್ಥಿಯ ಬಗ್ಗೆ ಚರ್ಚೆ ನಡೆಸಿ ಪಕ್ಷದ ಕೇಂದ್ರ ಸಮಿತಿಗೆ ಶಿಫಾರಸು ಮಾಡುವ ಸಾಧ್ಯತೆಯಿದೆ. ಶಿಫಾರಸು ಮಾಡದಿದ್ದರೂ ಚರ್ಚೆಯಂತೂ ನಡೆಯಲಿದೆ ಎಂದು ಮೂಲಗಳು ತಿಳಿಸಿವೆ.